ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ವಿಭಾಗ
ಜಿ.ಕೆ.ವಿ.ಕೆ., ಬೆಂಗಳೂರು-560065

* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 31.07.2015

ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

ಈ ವಾರದ ಮುನ್ಸೂಚನೆ (ದಿನಾಂಕ 01.08.15 –05.08.15 ವರೆಗೆ)

	01.08.15	02.08.15	03.08.15	04.08.15	05.08.15
ಮಳೆ (ಮಿ ಮಿ)	3	3	6	7	2
ಗರಿಷ್ಠ ಉಷ್ಣಾಂಶ(ಡಿ.ಸೆ.)	31	30	29	30	30
ಕನಿಷ್ಠ ಉಷ್ಣಾಂಶ (ಡಿ.ಸೆ.)	21	21	20	21	21
ವೋಡ (ಪ್ರಮಾಣ)	5	7	6	6	6
ಅರ್ದ್ರತೆ ೭.೨೦ ಬೆ (ಶೇ)	80	84	83	79	80
ಅರ್ದ್ರತೆ ೨.೨೦ ಮ (ಶೇ)	54	50	56	50	59
ಗಾಳಿಯ ವೇಗ (ಕಿ.ಮಿ/ಗಂಟೆಗೆ)	9	8	10	8	10
ಗಾಳಿಯ ದಿಕ್ಕು (ಡಿಗ್ರಿ)	270	270	270	270	260

ಮುಂದಿನ ದಿನಗಳಲ್ಲಿ ಹಗುರದಿಂದ ಮಳೆಯಾಗುವ ಸಂಭವವಿದೆ. ದಿನದ ಗರಿಷ್ಠ ಉಷ್ಣಾಂಶ **29.0-31.0°C** ಮತ್ತು ಕನಿಷ್ಠ **20.0-21.0°C** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **79-84 %** ಇದ್ದು ಮಧ್ಯಾಹ್ನ **50-59 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **8-10** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

ಜುಲೈ-ಆಗಸ್ಟ್ ತಿಂಗಳಲ್ಲಿ ಬಿತ್ತನೆ ಮಾಡಬೇಕಾದ ಬೆಳೆಗಳು:

- ಪೂರ್ವ ಒಣ ಪ್ರದೇಶಗಳಾದ ಬೆಂಗಳೂರು, ಕೋಲಾರ, ಚಿಕ್ಕಬಳ್ಳಾಪುರ ಮತ್ತು ತುಮಕೂರಿನ ಕೆಲವು ಭಾಗಗಳಲ್ಲಿ, ಜಿ.ಪಿ.ಯು-28, ಹೆಚ್.ಆರ್.-911 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು. ಸೂರ್ಯಕಾಂತಿ ತಳಿಗಳಾದ ಮಾರ್ಡೆನ್, ಕೆ.ಬಿ.ಎಸ್.ಹೆಚ್-1, ಕೆ.ಬಿ.ಎಸ್.ಹೆಚ್-41, ಕೆ.ಬಿ.ಎಸ್.ಹೆಚ್-42, ಕೆ.ಬಿ.ಎಸ್.ಹೆಚ್-44, ಕೆ.ಬಿ.ಎಸ್.ಹೆಚ್-53 ತಳಿಗಳನ್ನು ಬಿತ್ತನೆ ಮಾಡಬಹುದು. ಶಕ್ತಿಮಾನ್ ಜೋಳದ ತಳಿಗಳಾದ ಡೆಕ್ಕನ್-103, ವಿಜಯ ಕಾಂಪೋಸಿಟ್ ಮತ್ತು ಗಂಗಾ-11 ತಳಿಗಳನ್ನು ಆಯ್ಕೆ ಮಾಡಿಕೊಳ್ಳಬಹುದು. ಅಲಸಂದೆ ಬೆಳೆಯಲ್ಲಿ ಸಿ-152 ಮತ್ತು ಕೆ.ಎಮ್-5, ಅಥವಾ ತರಕಾರಿಗಾಗಿ ಪಿ.ಕೆ.ಬಿ-4 ತಳಿಯನ್ನು ಆಯ್ಕೆ ಮಾಡಿಕೊಳ್ಳಬಹುದು.
- ತೇವಾಂಶದ ಸಂರಕ್ಷಣೆಗಾಗಿ ಮತ್ತು ಇರುವಂತಹ ಕಳೆ ನಿರ್ವಹಣೆಗೋಸ್ಕರ, ಒಂದೆರಡು ಬಾರಿ ಕುಂಟೆ ಹಾಯಿಸುವುದು.
- ಮೇ ಮತ್ತು ಜೂನ್ ತಿಂಗಳಲ್ಲಿ ಸಾಧಾರಣಕ್ಕಿಂತ ಹೆಚ್ಚು ಮಳೆಯಾಗಿರುವ ಕಾರಣ ಹರಿದು ಹೋಗುವ ಮಳೆ ನೀರನ್ನು ಕೃಷಿ ಹೊಂಡ, ನಾಲಾಬದು, ನಾಲಾ ಹೊಂಡಗಳಲ್ಲಿ ಶೇಖರಣೆಯಾಗಿರುತ್ತದೆ. ಈ ಶೇಖರಣಾ ರಚನೆಗಳಲ್ಲಿ ಇರುವಂತಹ ನೀರನ್ನು ಸದ್ಬಳಕೆ ಮಾಡಿಕೊಂಡು ಬೆಳೆ ರಕ್ಷಣಾತ್ಮಕ ನೀರಾವರಿಯನ್ನು ಒಂದು ಬಾರಿ ಕೊಡುವುದು.
- ಎಲ್ಲೆಲ್ಲಿ ದೀರ್ಘಾವದಿ ಬೆಳೆಗಳು (ತೊಗರಿ ಮತ್ತು ಹರಳು) ಬಿತ್ತನೆ ಮಾಡಿದಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.
- ಕಿತ್ತಂತಹ ಕಳೆ ಮತ್ತು ಬದುಗಳಲ್ಲಿ ಬೆಳೆದಿರುವ ಗ್ಲಿರೀಸಿಡಿಯ (ಹಸಿರೆಲೆ ಗೊಬ್ಬರದ ಗಿಡ) ಸೊಪ್ಪನ್ನು ಉಪಯೋಗಿಸಿಕೊಂಡು ಸಾಲುಗಳ ಮಧ್ಯದಲ್ಲಿ ಭೂ-ಹೊದಿಕೆಯಾಗಿ ಹರಡುವುದು.

- ಈಗಾಗಲೇ ಮೇ ಮತ್ತು ಜೂನ್ ತಿಂಗಳಲ್ಲಿ ಬಿತ್ತನೆ ಮಾಡಿರುವಂತಹ ದೀರ್ಘಾವಧಿ ಬೆಳೆಗಳಾದ ತೊಗರಿ, ಹರಳು ಬಿತ್ತನೆಯಾಗಿದ್ದಲ್ಲಿ ಮೇಲೆ ತಿಳಿಸಿರುವ ಬೇಸಾಯ ಕ್ರಮಗಳ ಜೊತೆಗೆ, ಸಾಲುಗಳ ಮಧ್ಯದಲ್ಲಿರುವ ಮಣ್ಣನ್ನು ಗಿಡದ ಬುಡಕ್ಕೆ ಹಾಕುವುದರಿಂದ ಭೂಮಿಯು ದಿಂಡು ಸಾಲಾಗಿ ಪರಿವರ್ತನೆಯಾಗುತ್ತದೆ ಇದರಿಂದ ಗಿಡಗಳಿಗೆ ಹೆಚ್ಚು ಸಿಗುವಂತಾಗಿ ಒಣಹವೆಯ ಅನಾನುಕೂಲತೆಯನ್ನು ಮುಂದೂಡಬಹುದು.

- ಎಲ್ಲೆಲ್ಲಿ ಶಿಫಾರಿಸಿಗಿಂತ ಹೆಚ್ಚು ಗಿಡಗಳ ಸಂಖ್ಯೆ ಇದೆಯೋ ಅಲ್ಲಿ ಬೆಳೆ ಸಸಿಗಳ ಸಂಖ್ಯೆಯನ್ನು ಕಡಿಮೆಗೊಳಿಸುವುದರಿಂದ ಮಣ್ಣಿನ ತೇವಾಂಶದ ಸದ್ಬಳಕೆ ಮಾಡಿಕೊಳ್ಳಬಹುದು.

- ಅಲ್ಪಾವದಿ ದ್ವಿದಳ ಧಾನ್ಯಬೆಳೆಗಳಾದ ಹೆಸರು, ಉದ್ದು ಧಾನ್ಯಗಳಲ್ಲಿ ಹೇನುಗಳ ಹತೋಟಿಗೆ ಶೇ. 4ರಷ್ಟು ಬೇವಿನ ಕಷಾಯವನ್ನು ಸಿಂಪಡಿಸಬೇಕು ಅಥವಾ ಬೇವಿನ ಎಣ್ಣೆಯನ್ನು ಸಿಂಪಡಿಸಬೇಕು/ನೀರನ್ನು ರಭಸವಾಗಿ ಸಿಂಪಡಣೆ ಮಾಡುವುದರಿಂದಲೂ ಏಫಿಡ್ಸ್ (ಹೇನುಗಳು) ಹಾಗೂ ಇನ್ನಿತರೆ ರಸಹೀರುವ ಕೀಟಗಳನ್ನು ಹತೋಟಿಯಲ್ಲಿಡಬಹುದು. ಅಂಟು ದ್ರಾವಣವನ್ನು ಲೇಪಿಸಿದ ಹಳದಿ ಬಣ್ಣದ ಅಂಟು ಬಲೆಗಳನ್ನು ಅಲ್ಲಲ್ಲಿ ಇಡುವುದರಿಂದ ಬಿಳಿನೊಣ, ರೆಕ್ಕೆ ಇರುವ ಏಫಿಡ್ಸ್ ಹಾಗೂ ಇನ್ನಿತರೆ ಕೀಟಗಳು ಆಕರ್ಷಣೆಗೊಂಡು ಆ ಬಲೆಗೆ ಅಂಟಿಕೊಳ್ಳುತ್ತವೆ.

ನೋಡಲ್ ಅಧಿಕಾರಿ:
ಕೃ.ವಿ.ವಿ, ಜಿ.ಕೆ.ವಿ.ಕೆ
ಬೆಂಗಳೂರು